All India Radio: Bangalore
Regional Bulletin In Kannada
ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

16.12.2024 2.30 p.m.

<><><><>

ಮುಖ್ಯಾಂಶಗಳು

- ವಿಧಾನಸಭೆಯಲ್ಲಿ ಉತ್ತರ ಕರ್ನಾಟಕದ ಅಭಿವೃದ್ಧಿ ಕುರಿತು ಚರ್ಚೆ; ಬೆಣ್ಣೆ ಹಳ್ಳ ಪ್ರವಾಹ ತಗ್ಗಿಸಲು ಕ್ರಮ ಕೈಗೊಳ್ಳುವಂತೆ ಶಾಸಕ ಕೋನರೆಡ್ಡಿ ಆಗ್ರಹ
- ವಕ್ಫ್ ಹಗರಣ ಮುಚ್ಚಿಹಾಕಲು ೧೫೦ ಕೋಟಿ ರೂಪಾಯಿ ಆಮಿಷ ಆರೋಪ; ಸಿಬಿಐ ತನಿಖೆಗೆ ಶಾಸಕ ಬಿ.ವೈ.ವಿಜಯೇಂದ್ರ ಆಗ್ರಹ
- ರಾಜ್ಯದಲ್ಲಿ ಸಿಜೇರಿಯನ್ ಪ್ರಕರಣ ತಡೆಗೆ ಸರ್ಕಾರ ಕಟ್ಟುನಿಟ್ಟಿನ ಕ್ರಮ; ವಿಧಾನಪರಿಷತ್‌ನಲ್ಲಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಸ್ಪಷ್ಟನೆ
- ಸದನದಲ್ಲಿ ಉತ್ತರ ಕರ್ನಾಟಕದ ಕುರಿತ ಚರ್ಚೆಗೆ, ವಕ್ಫ್ ಮಂಡಳಿ ಕುರಿತು ಉತ್ತರ ನೀಡಲು ಸರ್ಕಾರ ಸಿದ್ಧವಿದೆ- ಮುಖ್ಯಮಂತ್ರಿ ಸಿದ್ದರಾಮಯ್ಯ

<><><><>

ವಿಧಾನಸಭೆಯಲ್ಲಿಂದು ಮಾಜಿ ವಿಧಾನಸಭಾ ಸದಸ್ಯರಾದ ನರಸಿಂಹಸ್ವಾಮಿ ಜೆ ಮತ್ತು ಖ್ಯಾತ ತಬಲಾ ವಾದಕ ಜಾಕಿರ್ ಹುಸೇನ್ ಅವರ ನಿಧನಕ್ಕೆ ಭಾವಪೂರ್ಣ ಸಂತಾಪ ಸೂಚಿಸಲಾಯಿತು. ಕಲ್ಯಾಣ ಕರ್ನಾಟಕ ಮಾದರಿಯಲ್ಲೇ ಕಿತ್ತೂರು ಕರ್ನಾಟಕದ ಅಭಿವೃದ್ಧಿಗೆ ೩೭೧-ಜೆ ವಿಶೇಷ ಸ್ಥಾನಮಾನವನ್ನು ನೀಡುವಂತೆ ಒತ್ತಾಯಿಸುವ ನಿರ್ಣಯವನ್ನು ಕೈಗೊಳ್ಳಬೇಕು ಎಂದು ಕಾಂಗ್ರೆಸ್ ಶಾಸಕ ಎನ್.ಎಚ್.ಕೋನರೆಡ್ಡಿ ವಿಧಾನಸಭೆಯಲ್ಲಿ ಆಗ್ರಹಿಸಿದರು. ಉತ್ತರ ಕರ್ನಾಟಕದ ಅಭಿವೃದ್ಧಿ ಕುರಿತ ವಿಶೇಷ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕಿತ್ತೂರು ಕರ್ನಾಟಕ ಅತಿ ಹಿಂದುಳಿದೆ. ಡಾ.ಪರಮಶಿವಯ್ಯ ವರದಿಯಂತೆ ಬೆಣ್ಣೆ ಹಳ್ಳದ ಪ್ರವಾಹ ತಗ್ಗಿಸಲು ಕ್ರಮ ಕೈಗೊಳ್ಳಬೇಕು. ಬೆಣ್ಣೆ ಹಳ್ಳದ ಪ್ರವಾಹದಿಂದ ನಾಲ್ಕು ತಾಲ್ಲೂಕುಗಳು ಪ್ರವಾಹಕ್ಕೆ ಸಿಲುಕುತಿದ್ದು, ಬೆಣ್ಣೆ ಹಳ್ಳ ಅಗಲಿಕರಣ ಮಾಡುವುದರಿಂದ ಹಳ್ಳಿಗಳ ಮುಳುಗಡೆ ತಪ್ಪಿಸಹುದು ಎಂದು ಹೇಳಿದರು. ಉತ್ತರ ಕರ್ನಾಟಕ ಭಾಗದಲ್ಲಿ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ, ಜಿಲ್ಲಾ ಮುಖ್ಯ ರಸ್ತೆ ಸೇರಿದಂತೆ ಎಲ್ಲಾ ಬಗೆಯ ರಸ್ತೆಗಳು ಹಾಳಾಗಿವೆ. ಬೆಳಗಾವಿಯ ಅಧಿವೇಶನ ಕೇವಲ ಪ್ರತಿಭಟನೆಗೆ ಸೀಮಿತವಾಗದೇ ಪಕ್ಷಾತೀತವಾಗಿ ಸಮಸ್ಯೆಗಳ ಮೇಲೆ ಬೆಳಕು ಚೆಲ್ಲುವಂತಹ ಕಾರ್ಯವಾದರೆ ಮಾತ್ರ ಅಭಿವೃದ್ಧಿ ಮಾಡಲು ಸಾಧ್ಯ ಎಂದರು. ಆಡಳಿತ ಪಕ್ಷದ ಶಾಸಕ ಶ್ರೀನಿವಾಸ್ ಮಾನೆ ಮಾತನಾಡಿ, ಶಿಕ್ಷಣ, ನೀರಾವರಿ, ಸಾರಿಗೆ ಸೇರಿದಂತೆ ಉತ್ತರ ಕರ್ನಾಟಕದ ಸಮಗ್ರ ಅಭಿವೃದ್ಧಿಯ ಬಗ್ಗೆ ವರದಿ ಪಡೆಯಬೇಕು. ಆ ವರದಿ ಆಧರಿಸಿ ಕೇಂದ್ರ ಸರ್ಕಾರದಿಂದ ಅನುದಾನ ಪಡೆಯುವಂತಾಗಬೇಕು ಎಂಬ ಸಲಹೆ ನೀಡಿದರು. ಜೆಡಿಎಸ್ ಶಾಸಕ ನೇಮಿರಾಜ್ ನಾಯಕ್ ಮಾತನಾಡಿ, ಉತ್ತರ ಕರ್ನಾಟಕದಲ್ಲಿ ಬಡತನ ನಿರ್ಮೂಲನೆಯಾದರೆ ಮಾತ್ರ ಅಭಿವೃದ್ಧಿ

ಸಾಧ್ಯ. ಉತ್ತರ ಕರ್ನಾಟಕದಲ್ಲಿ ಕೆರೆಗಳಿಗೆ ನೀರು ತುಂಬಿಸುವ ಕೆಲಸವಾಗಬೇಕು ಎಂದು ತಿಳಿಸಿದರು. ವಕ್ಫ್ ಆಸ್ತಿ ಅತಿಕ್ರಮಣಕ್ಕೆ ಸಂಬಂಧಿಸಿದಂತೆ ಅಲ್ಪಸಂಖ್ಯಾತ ಆಯೋಗದ ಮಾಜಿ ಅಧ್ಯಕ್ಷ ಅನ್ವರ್ ಮಾಣಿಪ್ಪಾಡಿ ಅವರಿಗೆ ೧೫೦ ಕೋಟಿ ರೂಪಾಯಿ ಆಮಿಷ ಒಡ್ಡಲಾಗಿದೆ ಎಂಬ ಆರೋಪದ ಬಗ್ಗೆ ಸಿಬಿಐ ತನಿಖೆ ನಡೆಸಬೇಕು ಎಂದು ಶಾಸಕ ಬಿ.ವೈ.ವಿಜಯೇಂದ್ರ ವಿಧಾನಸಭೆಯಲ್ಲಿಂದು ಆಗ್ರಹಿಸಿದ್ದಾರೆ. ಅನ್ವರ್ ಮಾಣಿಪ್ಪಾಡಿ ನೀಡಿರುವ ವರದಿ ಹಾಗೂ ಇದರ ಬಗ್ಗೆ ಉಪಲೋಕಾಯುಕ್ತ ಆನಂದ ಅವರು ನೀಡಿರುವ ವರದಿಗಳ ಬಗ್ಗೆ ಈ ಸದನದಲ್ಲಿ ಚರ್ಚೆಯಾಗಬೇಕು ಹಾಗೂ ಪ್ರಕರಣವನ್ನು ಸಿಬಿಐ ತನಿಖೆಗೆ ವಹಿಸಬೇಕು ಎಂದು ಸವಾಲು ಹಾಕಿದ್ದಾರೆ. ಇದೇ ವೇಳೆ ಮುಡಾ ಹಗರಣವನ್ನು ಸಿಬಿಐ ತನಿಖೆಗೆ ನೀಡಲಿ ಎಂದಾಗ ಬಿಜೆಪಿ ಶಾಸಕರು ಮೇಜು ಕುಟ್ಟಿ ಸ್ವಾಗತಿಸಿದರು.

<><><><>

ವಿಧಾನಪರಿಷತ್ ಕಲಾಪದಲ್ಲಿಯೂ ಸಭಾಪತಿ ಬಸವರಾಜ ಹೊರಟ್ಟಿ ಸಂತಾಪ ನಿರ್ಣಯವನ್ನು ಕೈಗೆತ್ತಿಕೊಂಡರು. ಭಾರತದ ಹೆಸರಾಂತ ತಬಲಾ ಮಾಂತ್ರಿಕ ಜಾಕೀರ್ ಹುಸೇನ್ ನಿಧನಕ್ಕೆ ವಿಧಾನ ಪರಿಷತ್ ನಲ್ಲಿ ಸಂತಾಪ ಸೂಚಿಸಲಾಯಿತು. ಸಭಾಪತಿಗಳ ಮನವಿಗೆ ಸ್ಪಂದಿಸಿದ ಬಿಜೆಪಿ ಸದಸ್ಯರು ಸಂತಾಪ ನಿರ್ಣಯದ ಬಳಿಕ ಧರಣಿಯನ್ನು ಮುಂದುವರೆಸಿದರು. ರಾಜ್ಯದಲ್ಲಿ ಸಿಜೇರಿಯನ್ ಪ್ರಕರಣಗಳು ಹೆಚ್ಚಾಗುತ್ತಿದ್ದು, ಖಾಸಗಿ ಆಸ್ಪತ್ರೆಗಳಿಗೆ ಇದು ಒಂದು ದಂಧೆಯಾಗಿ ಪರಿಣಮಿಸಿದೆ ಎಂದು ಸದಸ್ಯ ಜಗದೇವ ಗುತ್ತೇದಾರ್ ಪ್ರಶ್ನೆಗೆ ಉತ್ತರಿಸಿದ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ರಾಜ್ಯದಲ್ಲಿ ಹೆಚ್ಚುತ್ತಿರುವ ಸಿಜೇರಿಯನ್ ಪ್ರಕರಣಗಳನ್ನು ತಡೆಗಟ್ಟಲು ರಾಜ್ಯ ಸರ್ಕಾರ ನೂತನ ಕಾರ್ಯಕ್ರಮವನ್ನು ಜಾರಿಗೆ ತರಲಿದೆ ಎಂದು ವಿಧಾನಪರಿಷತ್‌ನಲ್ಲಿ ಪ್ರಕಟಿಸಿದರು. ಖಾಸಗಿ ಆಸ್ಪತ್ರೆಗಳಲ್ಲಿ ಹಣದ ಆಸೆಗೆ ಶೇಕಡ ೬೦ರಷ್ಟು ಸಿಜೇರಿಯನ್ ನಡೆಯುತ್ತಿವೆ. ಬಹುತೇಕ ವೈದ್ಯರು ಇಂತಹ ಸುಲಭ ದಾರಿ ಕಂಡುಕೊಂಡಿದ್ದಾರೆ ಎಂದು ಹೇಳಿದರು. ಕೆಲ ಮಹಿಳೆಯರು ಸಿಜೇರಿಯನ್ ಬಯಸುತ್ತಿದ್ದು, ಸರ್ಕಾರ ಏನು ಮಾಡಲು ಸಾಧ್ಯ ಎಂದು ಪ್ರಶ್ನಿಸಿದರು. ರಾಜ್ಯದಲ್ಲಿ ಭ್ರೂಣ ಹತ್ಯೆ ತಡೆಗೂ ಸಾಕಷ್ಟು ಕ್ರಮ ಕೈಗೊಳ್ಳಲಾಗಿದ್ದು, ಬೆಳಗಾವಿ, ಕೋಲಾರ, ಬೆಂಗಳೂರು ಗ್ರಾಮಾಂತರ ಸೇರಿದಂತೆ ಒಟ್ಟು ನಾಲ್ಕು ಜಿಲ್ಲೆಗಳಲ್ಲಿ ಪ್ರಕರಣ ಸಂಬಂಧ ೪೫ ಮಂದಿಯನ್ನು ಬಂಧಿಸಲಾಗಿದೆ ಎಂದು ಸಚಿವರು ಸ್ಪಷ್ಟಪಡಿಸಿದರು.

<><><><>

ಸದನದಲ್ಲಿ ಉತ್ತರ ಕರ್ನಾಟಕದ ಕುರಿತ ಚರ್ಚೆಗೆ, ವಕ್ಫ್ ಮಂಡಳಿ ಕುರಿತು ಉತ್ತರ ನೀಡಲು ಸರ್ಕಾರ ಸಿದ್ಧವಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಬೆಳಗಾವಿಯಲ್ಲಿ ಮಾತನಾಡಿದ ಅವರು ಪಂಚಮಸಾಲಿ ಸಮುದಾಯಕ್ಕೆ ಪ್ರವರ್ಗ ೨ಎ ಮೀಸಲಾತಿಗೆ ಸಂಬಂಧಿಸಿದಂತೆ ನಡೆಯುತ್ತಿರುವ ಹೋರಾಟದ ಕುರಿತು ಮುಖ್ಯಮಂತ್ರಿ ಕ್ಷಮೆ ಕೇಳಬೇಕು ಎಂಬ ಬಗ್ಗೆ ಪ್ರತಿಕ್ರಿಯಿಸಿ ಯಾರು ಸಮಸ್ಯೆಯನ್ನು ಇತ್ಯರ್ಥ ಮಾಡಿಲ್ಲವೋ ಅವರೇ ಕ್ಷಮೆ ಕೇಳಲಿ ಎಂದು ಆಗ್ರಹಿಸಿದ್ದಾರೆ.

**ಧ್ವನಿ: ಮುಖ್ಯಮಂತ್ರಿ ಸಿದ್ದರಾಮಯ್ಯ**

<><><><>

ರಾಜಕೀಯ ಒತ್ತಡದಿಂದಾಗಿ ಅಲ್ಪಸಂಖ್ಯಾತ ಆಯೋಗದ ಮಾಜಿ ಅಧ್ಯಕ್ಷ ಅನ್ವರ್ ಮಾಣಿಪ್ಪಾಡಿ ಅವರು ಹೇಳಿಕೆ ಬದಲಾಯಿಸಿದ್ದಾರೆ ಎಂದು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ. ಬೆಳಗಾವಿಯ ಸುವರ್ಣಸೌಧದ ಆವರಣದಲ್ಲಿ ಮಾತನಾಡಿ, ತಮ್ಮ ವಿಚಾರವನ್ನು ಪ್ರಧಾನಮಂತ್ರಿ ಹಾಗೂ ಗೃಹಮಂತ್ರಿಗಳಿಗೆ ಪತ್ರ ಬರೆದು ತಿಳಿಸಿರುವುದಾಗಿ ಅನ್ವರ್ ಮಾಣಿಪ್ಪಾಡಿ ಹೇಳಿದ್ದರು. ಹೀಗಾಗಿ ಪ್ರಕರಣದ ಬಗ್ಗೆ ಸಿಬಿಐ ತನಿಖೆ ಮಾಡುವುದಾಗಿ ರಾಜ್ಯ ಸರ್ಕಾರಕ್ಕೆ ಪತ್ರ ಬರೆಯಲಿ ಎಂದು ಹೇಳಿದ್ದಾರೆ. ಬಿಜೆಪಿ ನಾಯಕರು ಅವರ ಧ್ವನಿ ಪರಿಶೀಲಿಸಲಿ ಎಂದು ಸ್ಪಷ್ಟಪಡಿಸಿದ್ದಾರೆ.

<><><><>

ಚಿತ್ರದುರ್ಗ ನಗರದ ವಿ.ಪಿ.ಬಡಾವಣೆಯಲ್ಲಿರುವ ಮಾಜಿ ಮುಖ್ಯಮಂತ್ರಿಗಳಾದ ದಿ.ಎಸ್.ನಿಜಲಿಂಗಪ್ಪನವರು ವಾಸವಿದ್ದ ಮನೆಯನ್ನು ಸರ್ಕಾರ ಖರೀದಿಸಿದೆ. ಈ ಹಿನ್ನೆಲೆಯಲ್ಲಿ ಇಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಭೇಟಿ ನೀಡಿ, ಪರಿಶೀಲನೆ ನಡೆಸಿದರು. ನಿಜಲಿಂಗಪ್ಪ ಸ್ಮಾರಕ ಟ್ರಸ್ಟಿ ಕೆಇಬಿ ಷಣ್ಮುಖಪ್ಪ ಅವರು, ನಿಜಲಿಂಗಪ್ಪ ನಿವಾಸದ ಕೀಯನ್ನು ಜಿಲ್ಲಾಡಳಿತಕ್ಕೆ ಹಸ್ತಾಂತರಿಸಿದರು.

**ಧ್ವನಿ: ವೆಂಕಟೇಶ್.ಡಿ**

<><><><>

ಗ್ರಾಮ ಪಂಚಾಯತಿ ಅನುದಾನವನ್ನು ಖಜಾನೆ ಮೂಲಕ ಬಳಸಲು ಸರ್ಕಾರ ಮುಂದಾಗಿದೆ. ತುಮಕೂರು ಜಿಲ್ಲೆಯ ತಿಮ್ಮರಾಜನಹಳ್ಳಿ ಗ್ರಾಮ ಪಂಚಾಯತಿ ಖಜಾನೆ ಮೂಲಕವೇ ಅನುದಾನ ಬಳಕೆಗೆ ಆಯ್ಕೆ ಮಾಡಲಾಗಿದೆ ಎಂದು ಜಿಲ್ಲಾ ಪಂಚಾಯತಿ ಮುಖ್ಯಕಾರ್ಯನಿರ್ವಹಣಾಧಿಕಾರಿ ಜಿ.ಪ್ರಭು ತಿಳಿಸಿದ್ದಾರೆ. ಜಿಲ್ಲಾ ಮಟ್ಟದ ಪರಿಶಿಷ್ಟರ ಕುಂದುಕೊರತೆ ಸಭೆಯಲ್ಲಿ ಮಾತನಾಡಿದ ಅವರು ಗ್ರಾಮ ಪಂಚಾಯತಿಗಳಲ್ಲಿ ಅನುದಾನ ದುರ್ಬಳಕೆ ತಡೆಯುವ ನಿಟ್ಟಿನಲ್ಲಿ ಸರ್ಕಾರ ಪ್ರಾಯೋಗಿಕವಾಗಿ ಖಜಾನೆ ಮೂಲಕ ಅನುದಾನ ಬಳಕೆ ಮುಂದಾಗಿದೆ ಎಂದರು. ಖಜಾನೆ ಮೂಲಕ ಅನುದಾನ ಬಳಕೆ ಮಾಡುವುದರಿಂದ ಅನುದಾನ ದುರುಪಯೋಗವನ್ನು ತಡೆಯಬಹುದಾಗಿದೆ ಎಂದು ತಿಳಿಸಿದರು.

<><><><>

ಬೆಂಗಳೂರಿನ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರವಿಜ್ಞಾನ ಸಂಸ್ಥೆ- ನಿಮ್ಹಾನ್ಸ್ ಸದಸ್ಯರಾಗಿ ದಾವಣಗೆರೆ ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ್ ಆಯ್ಕೆಯಾಗಿದ್ದಾರೆ. ಲೋಕಸಭೆಯ ಇಬ್ಬರು ಸದಸ್ಯರ ಆಯ್ಕೆಗೆ ಸಂಬಂಧಿಸಿದಂತೆ ನವೆಂಬರ್ ೨೯ ರಂದು ನಾಲ್ಕು ನಾಮ ನಿರ್ದೇಶನಗಳನ್ನು ಸ್ವೀಕರಿಸಲಾಗಿತ್ತು . ಇಬ್ಬರು ಅಭ್ಯರ್ಥಿಗಳು ಚುನಾವಣೆಯಿಂದ ತಮ್ಮ ಉಮೇದುವಾರಿಕೆ ಹಿಂಪಡೆದಿದ್ದಾರೆ. ಬಳಿಕ ದಾವಣಗೆರೆ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್ ಹಾಗೂ ಪಿ.ಸಿ ಮೋಹನ್ ಸದಸ್ಯರಾಗಿ ಆಯ್ಕೆಯಾಗಿದ್ದಾರೆ.

<><><><>

ದೇಶಾದ್ಯಂತ ಇಂದು ವಿಜಯ ದಿವಸವನ್ನು ಆಚರಿಸಲಾಗುತ್ತಿದ್ದು, ಬೆಂಗಳೂರಿನ ರಾಷ್ಟೀಯ ಮಿಲಿಟರಿ ಸ್ಮಾರಕದಲ್ಲಿ ಭಾರತೀಯ ಯೋಧರು, ಮಾಜಿ ಸೈನಿಕರು, ರಕ್ಷಣಾ ಅಧಿಕಾರಿಗಳು

ಯುದ್ಧದಲ್ಲಿ ಹುತಾತ್ಮರಾದ ಯೋಧರಿಗೆ ಗೌರವ ನಮನ ಸಲ್ಲಿಸಿದರು. ವಾಯು ಪಡೆಯ ಮಾಜಿ ಕಮಾಂಡರ್ ಚಂದ್ರ ಶೇಖರ್ ಮಾತನಾಡಿ, ಬೆಂಗಳೂರಿನ ರಾಷ್ಟ್ರೀಯ ಮಿಲಿಟರಿ ಸ್ಮಾರಕ ದೇಶದಲ್ಲಿಯೆ ಮೊದಲ ಯೋಧರ ಸ್ಮಾರಕ ವಾಗಿದೆ. ಅತಿ ಎತ್ತರದ ಧ್ವಜ ಸ್ತಂಭವಿರುವ ಸ್ಮಾರಕ ಇದಾಗಿದೆ ಎಂದು ತಿಳಿಸಿದರು. ಮಾಜಿ ಸೈನಿಕ ಭಾಸ್ಕರ್, ಯುವಕರು ಭಾರತೀಯ ಸೇನೆಯಲ್ಲಿ ಸೇರ್ಪಡೆಯಾಗಿ ದೇಶ ಸೇವೆ ಮಾಡಬೇಕು ಎಂದು ಕರೆ ನೀಡಿದರು.

<><><><>

ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ ಉತ್ತರ ಕನ್ನಡ ಜಿಲ್ಲೆಯ ಎಲ್ಲಾ ತಾಲೂಕು ಕಾನೂನು ಸೇವಾ ಸಮಿತಿಗಳ ಆಶ್ರಯದಲ್ಲಿ ರಾಷ್ಟ್ರೀಯ ಲೋಕ ಅದಾಲತ್ ಯಶಸ್ವಿಯಾಗಿ ನಡೆಯಿತು ಎಂದು ಉತ್ತರಕನ್ನಡ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಡಿ.ಎಸ್.ವಿಜಯಕುಮಾರ್ ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ದಿವ್ಯಶ್ರೀ ಸಿ. ಎಮ್. ತಿಳಿಸಿದ್ದಾರೆ. ಜಿಲ್ಲೆಯಾದ್ಯಂತ ೧೬ ಸಾವಿರದ ೭೯೧ ವ್ಯಾಜ್ಯ ಪೂರ್ವ ಪ್ರಕರಣಗಳು ಹಾಗೂ ನ್ಯಾಯಾಲಯಗಳಲ್ಲಿ ಬಾಕಿ ಇರುವ ೫ ಸಾವಿರದ ೪೬೫ ಪ್ರಕರಣಗಳು ಸೇರಿದಂತೆ ಒಟ್ಟೂ ೨೧ ಸಾವಿರದ ೧೦೬ ಪ್ರಕರಣಗಳನ್ನು ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಇತ್ಯರ್ಥ ಮಾಡಲಾಗಿದೆ.

<><><><>

ಬ್ರಿಸ್ಬೇನ್‌ನ ಗಾಬಾ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ಬಾರ್ಡರ್ ಗವಾಸ್ಕರ್ ಟ್ರೋಫಿಯ ಮೂರನೇ ಟೆಸ್ಟ್ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಆಸ್ಟ್ರೇಲಿಯಾ ೪೪೫ ರನ್ ಗಳಿಸಿದೆ. ತನ್ನ ಮೊದಲನೇ ಇನ್ನಿಂಗ್ಸ್ ಆರಂಭಿಸಿರುವ ಭಾರತ ಇತ್ತೀಚಿನ ವರದಿ ಬಂದಾಗ ೪ ವಿಕೆಟ್ ನಷ್ಟಕ್ಕೆ ೫೯ ರನ್ ಗಳಿಸಿದೆ.

**<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>**

**<><> ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <><>**